# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 229 |
| ಸದಸ್ಯರ ಹೆಸರು | ಶ್ರೀ ಕೆ.ಹರೀಶ್ ಕುಮಾರ್. |
| ಉತ್ತರಿಸುವ ದಿನಾಂಕ | 06-12-2023 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಮಣ್ಯ ದೇವಸ್ಥಾನಕ್ಕೆ ಅಗತ್ಯವಿರುವ ದಿನಸಿ ಸಾಮಗ್ರಿಗಳನ್ನು ಜನತಾ ಬಜಾರ್ ಮೂಲಕ ನೇರವಾಗಿ ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ನಿಯಮಾವಳಿಯ ಅನುಸಾರ ಇ-ಟೆಂಡರ್ ಮೂಲಕ ಖರೀದಿಸುವುದು ನಿಯಮವಲ್ಲವೇ: | ಕುಕ್ಕೆ ಗ್ರಾಮದ ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಾಲಯಕ್ಕೆ ಅವಶ್ಯವಿರುವ ಅಕ್ಕಿ ಮತ್ತು ದಿನಸಿ ಸಾಮಗ್ರಿಗಳ ಖರೀದಿಸುವ ಬಗ್ಗೆ KTPP ಕಾಯ್ದೆ ಮತ್ತು ನಿಯಮಗಳನುಸಾರ ಕ್ರಮವಹಿಸಲು ಇ-ಟೆಂಡರ್ ಅನ್ನು ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ದಿನಾಂಕ:15.11.2023 ರಂದು ಪ್ರಕಟಣೆ ಹೊರಡಿಸಿ, ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |
| ಇ) | ಅದಾಗಿಯೂ ಕಳೆದ ಐದು ವರ್ಷಗಳಿಂದ ಸದರಿ ದೇವಸ್ಥಾನದ ಆಡಳಿತ ಮಂಡಳಿ ಮತ್ತು ಅಧಿಕಾರಿ ವರ್ಗ ಸೇರಿಕೊಂಡು ನೇರವಾಗಿ ಜನತಾ ಬಜಾರ್‌ನಿಂದ ಖರೀದಿಸಿ ಭ್ರಷ್ಟಾಚಾರಕ್ಕೆ ಎಡೆ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಕುರಿತಂತೆ ಸರ್ಕಾರವು ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಕಳೆದ 5 ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆ, ಕಡಬ ತಾಲ್ಲೂಕು, ಕುಕ್ಕೆ ಗ್ರಾಮದ ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದಲ್ಲಿ ಅನ್ನ ಪ್ರಸಾದಕ್ಕೆ ಅಗತ್ಯವಿರುವ ದಿನಸಿ ಸಾಮಗ್ರಿಗಳನ್ನು ಸರ್ಕಾರಿ ಸಂಸ್ಥೆಯಾದ ಜನತಾ ಬಜಾರ್‌ನಿಂದ ಖರೀದಿಸಲು ಸರ್ಕಾರದಿಂದ ನಿರ್ದೇಶನ ನೀಡಲಾಗಿರುತ್ತದೆ.<br><br>ಪ್ರಸ್ತುತ ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದಲ್ಲಿ ಅನ್ನ ಪ್ರಸಾದಕ್ಕೆ ಅಗತ್ಯವಿರುವ ದಿನಸಿ ಸಾಮಗ್ರಿಗಳನ್ನು ಇ-ಪ್ರಕ್ಯೂರ್‌ಮೆಂಟ್ ಮೂಲಕ ಖರೀದಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಕಂಇ 112 ಮುಸಪ್ರ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು